ಇ) ಇಲ್ಲ, ಆದರೂ ವಿದ್ಯುತ್ ಅಡಚಣೆಯ ವಿಷಯ ಮಂಡಳಿಯ ಗಮನಕ್ಕೆ ಬಂದೊಡನೆಯೇ, ವಿದ್ಯುತ್ ಸರಬರಾಜನ್ನು ಪುನರ್ ವ್ಯವಸ್ಥೆಗೊಳಿಸಲು, ತ್ವರಿತಗತಿಯಲ್ಲಿ ಕ್ರಮ ಕೈಗೊಳ್ಳಲಾಗುತ್ತಿದೆ.

ರಾಜ್ಯದಲ್ಲಿ ಪಡಿತರ ಚೀಟಿಗಳಿಂದ ವಿತರಣೆ ಮಾಡುವ ವಸ್ತುಗಳ ಬೆಲೆಯ ಹೆಚ್ಚಳ

365 - ಶ್ರೀ ಆರ್.ವಿ. ದೇಶಪಾಂಡೆ (ಹಳಿಯಾಳ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ರಾಜ್ಯದಲ್ಲಿ ಪಡಿತರ ಚೀಟಿಗಳ ಮೂಲಕ ಹಂಚುತ್ತಿರುವ ಅಕ್ಕಿ, ಗೋಧಿ, ಸಕ್ಕರೆ ಮತ್ತು ಸೀಮೆಎಣ್ಣೆ ಮತ್ತು ಪಾಮೋಲಿನ್ ಎಣ್ಣೆಗಳ ಬೆಲೆಯು ಇತ್ತೀಚಿನ ದಿನಗಳಲ್ಲಿ ಹೆಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಹಾಗಿದ್ದರೆ ಇದರಿಂದಾಗಿ ಸಾಮಾನ್ಯ ಜನರಿಗೆ ಆರ್ಥಿಕ ಭಾರ ಹೆಚ್ಚಾಗಿ ತೊಂದರೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಇ) *ಹಾಗಿದ್ದಲ್ಲಿ ಸರ್ಕಾರ ತನ್ನ ಪಾಲಿನ ಸಬ್ಸಿಡಿ (ಸಹಾಯಧನ)ವನ್ನು ಹೆಚ್ಚಿಸಲು ಕ್ರಮ ಕೈಗೊಳ್ಳುವುದೇ?*

ಶ್ರೀ ಟಿ.ಎನ್. ನರಸಿಂಹಮೂರ್ತಿ (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು) :

ಅ) ಬಂದಿದೆ.

ಆ) ಕೇಂದ್ರ ಸರ್ಕಾರವು ಪಡಿತರ ಪದಾರ್ಥಗಳ ಬೆಲೆಗಳನ್ನು ಪರಿಷ್ಕರಿಸಿರುವುದರಿಂದ ರಾಜ್ಯದಲ್ಲಿ ಪಡಿತರ ಪದಾರ್ಥಗಳ ಬೆಲೆಗಳನ್ನು ಹೆಚ್ಚಿಸಲಾಗಿದೆ.

ಇ) ಈಗಾಗಲೇ ಸಬ್ಸಿಡಿ ದರದಲ್ಲಿ ಆಹಾರ ಧಾನ್ಯಗಳನ್ನು ವಿತರಿಸಲಾಗುತ್ತಿದ್ದು ಈ ಸಂಬಂಧದಲ್ಲಿ ಸಹಾಯ ಧನ ಹಾಗೂ ಸಾಗಾಣಿಕೆ ವೆಚ್ಚವನ್ನು ಸರ್ಕಾರ ಭರಿಸುತ್ತಿದ್ದು 1991-92ನೇ ಸಾಲಿಗೆ 55-ಕೋಟಿ ರೂಪಾಯಿಗಳನ್ನು ನೀಡಲಾಗಿದೆ. ಈಗಿನ ಆರ್ಥಿಕ ಸ್ಥಿತಿಯು ಇನ್ನೂ ಹೆಚ್ಚಿನ ಹೊರೆಯನ್ನು ಭರಿಸುವುದು ಸರ್ಕಾರದಿಂದ ಸಾಧ್ಯವಿಲ್ಲ.ಹಳಿಯಾಳದಲ್ಲಿ ಸಾರಿಗೆ ಸಿಬ್ಬಂದಿ ವರ್ಗದವರಿಗಾಗಿ ವಸತಿ ಗೃಹ.

369 - ಶ್ರೀ ಆರ್.ವಿ. ದೇಶಪಾಂಡೆ (ಹಳಿಯಾಳ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ಹಳಿಯಾಳದಲ್ಲಿ ರಾಜ್ಯ ರಸ್ತೆ ಸಾರಿಗೆ ಸಿಬ್ಬಂದಿ ವರ್ಗದವರಿಗಾಗಿ ವಸತಿ ಗೃಹಗಳು ಮಂಜೂರಾಗಿರುವುದು ನಿಜವಲ್ಲವೇ?*

ಆ) *ಹಾಗಿದ್ದಲ್ಲಿ, ಇದರ ನಿರ್ಮಾಣ ಕೆಲಸ ಪ್ರಾರಂಭವಾಗಿದೆಯೇ? ಹಾಗೂ ಅದರ ಅಂದಾಜು ವೆಚ್ಚ ಎಷ್ಟು?*

ಇ) *ಸಿಬ್ಬಂದಿ ವರ್ಗದವರ ಹಿತದೃಷ್ಟಿಯಿಂದ ಆದಷ್ಟು ಬೇಗ ಈ ವಸತಿ ಗೃಹಗಳ ನಿರ್ಮಾಣ ಕೆಲಸವನ್ನು ತೆಗೆದುಕೊಳ್ಳಲು ಸರ್ಕಾರ ಸೂಕ್ತ ಕ್ರಮ ಕೈಗೊಳ್ಳುವುದೇ?*

ಶ್ರೀ ಆಜೀಜ್ ಸೇಠ್ (ಸಾರಿಗೆ ಸಚಿವರು) :